Akashvani : Bangalore
Regional Bulletin In Kannada
19.07.2024 / 18.40 hrs
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ
19.07.2024 / 18.40 hrs
<><*<><>*><>

ಮುಖ್ಯಾಂಶಗಳು

<><*<><>*><>

೧. ವಾಲ್ಮೀಕಿ ಅಭಿವೃದ್ಧಿ ನಿಗಮ ಹಗರಣದ ಬಗ್ಗೆ ತನಿಖೆ ಪ್ರಗತಿಯಲ್ಲಿ- ತಪ್ಪಿತಸ್ಥರ ವಿರುದ್ಧ ನಿರ್ದಾಕ್ಷಿಣ್ಯ ಕ್ರಮ - ಮುಖ್ಯಮಂತ್ರಿ ಸಮರ್ಥನೆ

೨. ರಾಜ್ಯಾದ್ಯಂತ ಶೀಘ್ರದಲ್ಲೇ ೧೫೦ ಎಸ್‌ಸಿ-ಎಸ್‌ಟಿ ವಿದ್ಯಾರ್ಥಿ ನಿಲಯ ಪ್ರಾರಂಭ

೩. ಮಳೆಹಾನಿ ಪರಿಹಾರಕ್ಕೆ ಜಿಲ್ಲೆಗಳಿಗೆ ೭೭೪ ಕೋಟಿ ರೂಪಾಯಿ ಹಂಚಿಕೆ- ೨೯ ಆರೈಕೆ ಕೇಂದ್ರಗಳ ಆರಂಭ- ಕಂದಾಯ ಸಚಿವರ ಮಾಹಿತಿ

೪. ಜಲಾಶಯಗಳಿಂದ ಹೆಚ್ಚುವರಿ ನೀರು ಬಿಡುಗಡೆಗೆ ಸಿದ್ಧತೆ - ಸ್ಥಳಿಯರಿಗೆ ಮುನ್ನೆಚ್ಚರಿಕೆ

<><*<><>*><>

ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ಅಕ್ರಮ ಹಣ ವರ್ಗಾವಣೆಗೆ ಸಂಬಂಧಿಸಿದಂತೆ ಎಫ್‌ಐಆರ್ ದಾಖಲಾಗಿದ್ದು, ಎಸ್‌ಐಟಿ ತನಿಖೆ ನಡೆಸಲಾಗುತ್ತಿದೆ. ಸಿಬಿಐ ಮತ್ತು ಜಾರಿ ನಿರ್ದೇಶನಾಲಯಗಳಿಂದಲೂ ತನಿಖೆಯಾಗುತ್ತಿದೆ. ಈ ಪ್ರಕರಣದಲ್ಲಿ ಯಾರನ್ನು ರಕ್ಷಿಸುವ ಪ್ರಶ್ನೆಯೇ ಇಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ವಿಧಾನಸಭೆಯಲ್ಲಿಂದು ವಿಷಯ ಕುರಿತ ಚರ್ಚೆಗೆ ಉತ್ತರಿಸಿದ ಅವರು, ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ೮೯ ಕೋಟಿ ೬೩ ಲಕ್ಷ ರೂಪಾಯಿ ಹಣ ಅಕ್ರಮವಾಗಿ ಹೈದರಾಬಾದಿನ ಆರ್‌ಬಿಎಲ್ ಬ್ಯಾಂಕಿಗೆ ವರ್ಗಾವಣೆಯಾಗಿದೆ. ಬ್ಯಾಂಕಿನವರೇ ಒಪ್ಪಿಕೊಂಡಿರುವಂತೆ ಬ್ಯಾಂಕಿನ ಸಿಬ್ಬಂದಿ ನೇರವಾಗಿ ಈ ಹಗರಣದಲ್ಲಿ ಶಾಮೀಲಾಗಿದ್ದಾರೆ. ಎಸ್‌ಐಟಿ ಯಿಂದ ಪ್ರಕರಣದ ಗಂಭೀರ ತನಿಖೆ ಪ್ರಗತಿಯಲ್ಲಿದೆ ಎಂದು ಹೇಳಿದರು. ನಿಗಮದವರು ಹೊಸ ಖಾತೆ ತೆರೆಯಬೇಕಾದರೆ, ಖಾತೆ ವರ್ಗಾವಣೆ ಮಾಡಬೇಕಾದರೆ, ಆರ್ಥಿಕ ಇಲಾಖೆಯ ಗಮನಕ್ಕೆ ತಂದು ಅನುಮತಿ ಪಡೆದುಕೊಳ್ಳಬೇಕು. ಆದರೆ, ಈ ನಿಯಮದ ಪಾಲನೆಯಾಗಿಲ್ಲ ಎಂದು ಹೇಳಿದರು. ಎಸ್‌ಸಿ, ಎಸ್‌ಟಿ ಸಮುದಾಯದ ಜೀವನಮಟ್ಟ ಸುಧಾರಣೆಗೆ

ತಮ್ಮ ಸರ್ಕಾರ ಬದ್ಧವಾಗಿದ್ದು, ಇದಕ್ಕಾಗಿ ಮೀಸಲಿಟ್ಟ ಒಂದು ರೂಪಾಯಿಯನ್ನೂ ಪೋಲಾಗಲು ಬಿಡುವುದಿಲ್ಲ ಎಂದು ಮುಖ್ಯಮಂತ್ರಿ ಹೇಳಿದರು. ಬಿಜೆಪಿ ಸರ್ಕಾರದ ಅವಧಿಯಲ್ಲಿ ಹಲವು ಹಗರಣಗಳಾಗಿವೆ. ಅವುಗಳ ಬಗ್ಗೆಯೂ ಸೂಕ್ತ ತನಿಖೆ ನಡೆಸಲಾಗುವುದು ಎಂದರು.

<><*<><>*><>

ರಾಜ್ಯದಲ್ಲಿ ಮಳೆ ಹಾನಿ ಪರಿಹಾರಕ್ಕಾಗಿ ಜಿಲ್ಲೆಗಳಿಗೆ ೭೭೪.೫ ಕೋಟಿ ರೂಪಾಯಿ ಒದಗಿಸಲಾಗಿದ್ದು, ೧೯ ಆರೈಕೆ ಕೇಂದ್ರಗಳನ್ನು ತೆರೆಯಲಾಗಿದೆ ಎಂದು ಕಂದಾಯ ಸಚಿವ ಕೃಷ್ಣಬೇರೇಗೌಡ ವಿಧಾನಸಭೆಯಲ್ಲಿಂದು ಮಾಹಿತಿ ನೀಡಿದ್ದಾರೆ. ಮಳೆಹಾನಿ ಕುರಿತ ಚರ್ಚೆಗೆ ಉತ್ತರಿಸಿದ ಅವರು, ಮಳೆಹಾನಿ ಪರಿಹಾರ ಕಾರ್ಯಕ್ಕೆ ಹಣದ ಕೊರತೆ ಇಲ್ಲ. ಅಗತ್ಯವಿದ್ದರೆ ಒಂದುನೂರರಿಂದ ಇನ್ನೂರು ಕೋಟಿ ರೂಪಾಯಿ ಒದಗಿಸಲು ಸರ್ಕಾರ ಸಿದ್ಧವಿದೆ ಎಂದು ಹೇಳಿದರು. ಜಿಲ್ಲಾಧಿಕಾರಿಗಳ ಖಾತೆಯಲ್ಲಿ ೧೦ ಕೋಟಿ ರೂಪಾಯಿಗಿಂತ ಕಡಿಮೆ ಹಣ ಇದ್ದಲ್ಲಿ ಕೂಡಲೇ ಅಗತ್ಯ ಹಣ ಬಿಡುಗಡೆ ಮಾಡಲಾಗುವುದು. ಮಳೆಹಾನಿಗೆ ಸಂಬಂಧಿಸಿದಂತೆ ರಾಜ್ಯ ವಿಕೋಪ ಪರಿಹಾರ ನಿಧಿ ಮಾರ್ಗಸೂಚಿ ಪ್ರಕಾರ ಪರಿಹಾರ ವಿತರಿಸಲು ಸೂಚಿಸಲಾಗಿದೆ. ಕಾಳಜಿ ಕೇಂದ್ರಗಳಲ್ಲಿ ಸಂತ್ರಸ್ತರಿಗೆ ಸೂಕ್ತ ಊಟೋಪಚಾರ ವ್ಯವಸ್ಥೆ ಕಲ್ಪಿಸಲಾಗಿದೆ. ರಾಜ್ಯದಲ್ಲಿ ವಾಡಿಕೆಗಿಂದ  ಈ ಬಾರಿ ಜೂನ್ ತಿಂಗಳಿಂದ ಈಚೆಗೆ ಶೇಕಡ ೨೨ ರಷ್ಟು ಹೆಚ್ಚು ಮಳೆಯಾಗಿದೆ. ಬೆಳಗಾವಿ ಮತ್ತು ಮಲೆನಾಡು ಸೇರಿದಂತೆ ಪ್ರವಾಹ ಪರಿಸ್ಥಿತಿ ಎದುರಾಗುವ ಆರು ಜಿಲ್ಲೆಗಳಲ್ಲಿ ಎನ್‌ಡಿಆರ್‌ಎಫ್ ತುಕಡಿಗಳನ್ನು ಈಗಾಗಲೇ ನಿಯೋಜಿಸಲಾಗಿದೆ. ಗ್ರಾಮಪಂಚಾಯಿತಿಮಟ್ಟದಲ್ಲಿ ಸಂಕಷ್ಟ ಪರಿಸ್ಥಿತಿ ನಿರ್ವಹಣೆಗೆ ಕಾರ್ಯಪಡೆಗಳು ಸಜ್ಜಾಗಿವೆ. ಮಳೆಯಿಂದ ಸಂಚಾರ ಬಂದ್ ಆಗಿರುವ ರಸ್ತೆಗಳ ದುರಸ್ತಿಗೆ ಆದ್ಯತೆ ನೀಡುವಂತೆ ಸೂಚಿಸಲಾಗಿದೆ. ಸಕ್ಲೇಶ್‌ಪುರ ಮತ್ತು ಕೊಡಗಿನಲ್ಲಿ ರಾತ್ರಿ ರಸ್ತೆ ಸಂಚಾರವನ್ನು ನಿರ್ಬಂಧಿಸಲಾಗಿದೆ ಎಂದು ಕೃಷ್ಣಬೈರೇಗೌಡ ತಿಳಿಸಿದ್ದಾರೆ.

<><*<><>*><>

ಎಸ್‌ಸಿ, ಎಸ್‌ಟಿ ಸಮುದಾಯ ಕಲ್ಯಾಣ ಯೋಜನೆಗಳಿಗೆ ಮೀಸಲಿಟ್ಟ ಹಣವನ್ನು ಗ್ಯಾರಂಟಿ ಯೋಜನೆಗಳಿಗೆ ಬಳಿಸಿಕೊಂಡರೂ ಸಹ ಅದೇ ಸಮುದಾಯದ ಫಲಾನುಭವಿಗಳಿಗೆ ಅನುಕೂಲವಾಗುವುದರಿಂದ ಹಣ ದುರುಪಯೋಗವಾಗುವ ಪ್ರಶ್ನೆಯೇ ಇಲ್ಲ ಎಂದು ಸಮಾಜ ಕಲ್ಯಾಣ ಸಚಿವ ಎಚ್.ಸಿ.ಮಹಾದೇವಪ್ಪ ಹೇಳಿದ್ದಾರೆ. ವಿಧಾನಸಭೆಯಲ್ಲಿ ಪ್ರಶ್ನೆಯೊಂದಕ್ಕೆ ಉತ್ತರಿಸಿದ ಪ್ರಶ್ನೆಯೊಂದಕ್ಕೆ ಉತ್ತರಿಸಿದ ಅವರು, ಗ್ಯಾರಂಟಿ ಯೋಜನೆಗಳಿಗೆ SCSP ಮತ್ತು TSP ಯೋಜನೆಯಡಿ ಮೀಸಲಾದ ಅನುದಾನವನ್ನು ಬಳಸಿಕೊಳ್ಳಲಾಗುತ್ತಿದೆ ಎಂದು ಟೀಕಿಸಲಾಗುತ್ತಿದೆ.

ಯಾವುದೇ ಕಾರಣಕ್ಕೂ ಸಮುದಾಯಕ್ಕೆ ಸಂಬಂಧಪಡದ ಅನ್ಯ ಯೋಜನೆಗಳಿಗೆ  ಈ ಹಣವನ್ನು ಬಳಸಲು ಕಾನೂನಿನಲ್ಲಿ ಅವಕಾಶವಿಲ್ಲ ಎಂದು ಹೇಳಿದರು.

<><*<><>*><>

ರಾಜ್ಯಾದ್ಯಂತ ಶೀಘ್ರದಲ್ಲೇ ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗ ಹಾಗೂ ಹಿಂದುಳಿದ ವರ್ಗಗಳ ೧೫೦ ವಿದ್ಯಾರ್ಥಿ ನಿಲಯಗಳನ್ನು ಪ್ರಾರಂಭಿಸಲಾಗುವುದು ಎಂದು ಹಿಂದುಳಿದ ವರ್ಗಗಳ ಇಲಾಖೆ ಸಚಿವ ಶಿವರಾಜ್ ತಂಗಡಗಿ ಹೇಳಿದ್ದಾರೆ. ವಿಧಾನಪರಿಷತ್ತಿನಲ್ಲಿಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದ ಅವರು, ಈ ಪೈಕಿ  ಬಾಲಕಿಯರ ೭೫ ಮತ್ತು ಬಾಲಕರ ೭೫ ಹಾಸ್ಟೆಲ್‌ಗಳು ಸೇರಿವೆ ಎಂದರು. ಕಳೆದ ಬಜೆಟ್‌ನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಘೋಷಿಸಿದ್ದರು. ಉದ್ದೇಶಿತ ವಿದ್ಯಾರ್ಥಿ ನಿಲಯಗಳ ನಿರ್ಮಾಣದಲ್ಲಿ ಮೈಸೂರು, ಬೆಳಗಾವಿ, ಧಾರವಾಡ ಸೇರಿದಂತೆ ವಿವಿಧ ಶೈಕ್ಷಣಿಕ ಜಿಲ್ಲೆಗಳಿಗೆ ಆದ್ಯತೆ ನೀಡಲಾಗುವುದು. ವಿದ್ಯಾರ್ಥಿಗಳ ಸಂಖ್ಯೆ ಹೆಚ್ಚಾಗುತ್ತಿರುವುದರಿಂದ ತಾಲೂಕು ಮಟ್ಟದಲ್ಲೂ ವಿದ್ಯಾರ್ಥಿ ನಿಯಲಗಳನ್ನು ಪ್ರಾರಂಭಿಸಲಾಗುವುದು ಎಂದು ಸಚಿವರು ತಿಳಿಸಿದರು. ಈ ಹಾಸ್ಟೆಲ್‌ಗಳಲ್ಲಿ ಪ್ರತಿ ತಿಂಗಳು ಆಹಾರ ಪದಾರ್ಥಗಳ ಗುಣಮಟ್ಟ ಪರೀಕ್ಷೆಗೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ ಎಂದರು.

<><*<><>*><>

ರಾಜ್ಯಾದ್ಯಂತ ವ್ಯಾಪಕ ಮಳೆಯಾಗುತ್ತಿದ್ದು, ಜಲಾಶಯಗಳಿಂದ ಹೆಚ್ಚುವರಿ ನೀರಿನ ಬಿಡುಗಡೆಗೆ ಸಮರೋಪಾದಿಯಲ್ಲಿ ಸಿದ್ಧತೆ ಮಾಡಿಕೊಳ್ಳಲಾಗುತ್ತಿದೆ. ಪ್ರಮುಖ ಜಲಾಶಯಗಳಾದ ಕೃಷ್ಣರಾಜಸಾಗರ, ಕಬಿನಿ, ತುಂಗಭದ್ರಾ, ಆಲಮಟ್ಟಿ ಸೇರಿದಂತೆ ಬಹುತೇಕ ಎಲ್ಲ ಜಲಾಶಯಗಳು ಸದ್ಯದಲ್ಲೆ ಭರ್ತಿಯಾಗುವ ಹಂತಕ್ಕೆ ತಲುಪಿವೆ. ಕೆಆರ್‌ಎಸ್ ಜಲಾಶಯ ಭರ್ತಿಯಾಗುತ್ತಿದ್ದು, ಜಲಾಶದಲ್ಲಿ ನೀರಿನ ಮಟ್ಟ ೧೨೦ ಅಡಿ ದಾಟಿದ ನಂತರ ಹೆಚ್ಚುವರಿ ನೀರನ್ನು ನದಿಗೆ ಬಿಡುಗಡೆ ಮಾಡಲಾಗುವುದು. ನದಿ ಪಾತ್ರದ ಜನರು ಸೂಕ್ತ ಮುನ್ನೆಚ್ಚರಿಕೆ ವಹಿಸಬೇಕು ಎಂದು ಮಂಡ್ಯ ಜಿಲ್ಲಾಧಿಕಾರಿ ಡಾ.ಕುಮಾರ ತಿಳಿಸಿದ್ದಾರೆ. ಕೆಆರ್‌ಎಸ್‌ನಿಂದ ೧ ಲಕ್ಷ ಕ್ಯೂಸೆಕ್‌ಗಿಂತ ಹೆಚ್ಚಿನ ಪ್ರಮಾಣದ ನೀರನ್ನು ಹರಿಸುವ ಸಂದರ್ಭದಲ್ಲಿ ನದಿ ಪಾತ್ರದಲ್ಲಿರುವ ಶ್ರೀರಂಗಪಟ್ಟಣ ತಾಲೂಕಿನ ೫೩, ಪಾಂಡವಪುರ ತಾಲೂಕಿನ ೧೫, ಮಳವಳ್ಳಿ ತಾಲೂಕಿನ ೨೧ ಗ್ರಾಮಗಳಲ್ಲಿ ನೆರೆ ಸಾಧ್ಯತೆ ನಿರೀಕ್ಷಿತ. ಹೇಮಾವತಿ ಜಲಾಶಯಕ್ಕೆ ಸಂಬಂಧಿಸಿದಂತೆ ಕೆಆರ್‌ಪೇಟೆ ತಾಲೂಕಿನ ಮೂರು ಗ್ರಾಮಗಳಲ್ಲು ಪ್ರವಾಹ ಪರಿಸ್ಥಿತಿ ಎದುರಾಗಬಹುದು ಎಂದು ಅಂದಾಜಿಸಲಾಗಿದೆ. ಈ ಗ್ರಾಮಗಳಿಗೆ ಅಧಿಕಾರಿಗಳು ಖುದ್ದಾಗಿ ಭೇಟಿ ನೀಡಿ ಮುನ್ನೆಚ್ಚರಿಕೆ ಕ್ರಮಗಳನ್ನು ಪರಿಶೀಲಿಸಬೇಕು ಎಂದು ಅವರು ತಿಳಿಸಿದ್ದಾರೆ. ಜಿಲ್ಲಾಮಟ್ಟದೊಂದಿಗೆ ತಾಲೂಕು ಮತ್ತು ಗ್ರಾಮಪಟ್ಟದಲ್ಲೂ ಕಾರ್ಯಪಡೆ

ಸಮಿತಿಗಳನ್ನು ರಚಿಸಲಾಗಿದ್ದು, ನೋಡಲ್ ಅಧಿಕಾರಿಗಳನ್ನು ನೇಮಕ ಮಾಡಲಾಗಿದೆ. ಈ ಎಲ್ಲ ಅಧಿಕಾರಿಗಳು ಕಾಟ ಕಾಲಕ್ಕೆ ಬಿಡುಗಡೆಯಾಗುವ ನೀರಿನ ಪ್ರಮಾಣ ಹಾಗೂ ಅಗತ್ಯವಿರುವ ಮುನ್ನೆಚ್ಚರಿಕೆ ಕ್ರಮಗಳ ಬಗ್ಗೆ ಗ್ರಾಮಸ್ಥರಿಗೆ ಮಾಹಿತಿ ನೀಡಬೇಕು ಎಂದು ಸೂಚಿಸಿದರು. ಮಂಡ್ಯ ಜಿಲ್ಲೆಯಲ್ಲಿ ಮಳೆ- ಪ್ರವಾಹ ಪರಿಸ್ಥಿತಿಯ ನಿರ್ವಹಣೆಗಾಗಿ ಎಲ್ಲ ತಾಲೂಕು ಕಚೇರಿಯಲ್ಲಿ ನಿಯಂತ್ರಣಾ ಕೊಠಡಿಗಳನ್ನು ಸ್ಥಾಪಿಸಬೇಕು. ನದಿ ಪಾತ್ರದ ತಗ್ಗಪ್ರದೇಶಗಳಲ್ಲಿರುವ ಜನವಸತಿ ಹಾಗೂ ಕೃಷಿ ಭೂಮಿಯ ಪರಿಸ್ಥಿತಿಗಳ ಬಗ್ಗೆ ನಿರಂತರ ನಿಗಾ ಇಡಬೇಕು ಎಂದು ಅವರು ಸೂಚಿಸಿದರು. ಸಂಭವನೀಯ ಪರಿಸ್ಥಿತಿ ನಿಭಾಯಿಸಲು ಅಗತ್ಯ ಸಿದ್ಧತೆಗಳನ್ನು ಸಜ್ಜಾಗಿಡಬೇಕು. ಜೆಸಿಬಿ, ಸ್ವಯಂಸೇಕರು, ಈಜು ಪರಿಣತರು ಹಾಗೂ ದೋಣಿಗಳ ವ್ಯವಸ್ಥೆ ಸಿದ್ಧ ಮಾಡಿಕೊಳ್ಳಬೇಕು. ರಸ್ಥೆಗಳ ಮೇಲೆ ನೀರು ನಿಂತಲ್ಲಿ, ಸಂಚಾರ ವ್ಯವಸ್ಥೆಯ ಬಗ್ಗೆ ಕಟ್ಟೆಚ್ಚರ ವಹಿಸಬೇಕು. ಪ್ರವಾಸಿಗರ ದಟ್ಟಣೆ ಇರುವ ಪ್ರದೇಶಗಳಲ್ಲಿ ಸೂಕ್ತ ಎಚ್ಚರಿಕೆ ಸೂಚನೆ ಫಲಕಗಳನ್ನು ಕಡ್ಡಾಯವಾಗಿ ಅಳವಡಿಸಬೇಕು. ಶ್ರೀರಂಗಪಟ್ಟಣದ ಗಂಜಾಮ್, ಮಳವಳ್ಳಿಯ ಮುತ್ತತ್ತಿ ಹಾಗೂ ಗಗನಚುಕ್ಕಿ ಸೇರಿದಂತೆ ಮಂಡ್ಯ ಜಿಲ್ಲೆಯ ಪ್ರವಾಸಿ ತಾಣಗಳಲ್ಲಿ ಪ್ರವಾಸಿಗರ ಚಲನವಲನವನ್ನು ಸತತ ಗಮನಿಸಬೇಕು ಎಂದೂ ಸಹ ಮಂಡ್ಯ ಜಿಲ್ಲಾಧಿಕಾರಿ ಸೂಚಿಸಿದ್ದಾರೆ. ಕೊಪ್ಪಳ ಜಿಲ್ಲೆಯಲ್ಲಿ ಉತ್ತಮ ಮಳೆಯಾಗುತ್ತಿದ್ದು, ತುಂಗಭದ್ರಾ ಜಲಾಶಯಕ್ಕೆ ಹೆಚ್ಚಿನ ನೀರು ಹರಿದು ಬರುತ್ತಿದೆ. ವಿಜಯನಗರ ಕಾಲುವೆಗಳಿಗೆ ಜಲಾಶಯದಿಂದ ನೀರು ಹಿರಿಸುವುದಕ್ಕೆ ಸಂಸದ ಕೆ.ರಾಜಶೇಖರ ಹಿಟ್ನಾಳ್ ಇಂದು ಚಾಲನೆ ನೀಡಿದರು. ಜಲಾಶಯದ ಎಡದಂಡೆ ಮುಖ್ಯ ಕಾಲುವೆಯ ಗೇಟ್‌ಗಳನ್ನು ತಳಿರುತೋರಣಗಳಿಂದ ಸಿಂಗರಿಸಲಾಗಿತ್ತು. ಸಂಸದ ಹಿಟ್ನಾಳ್ ಮಾತನಾಡಿ, ಐದಾರು ದಿನದಲ್ಲಿ ತುಂಗಭದ್ರಾ ಜಲಾಶಯ ತುಂಬುವ ಸಾಧ್ಯತೆಯಿದೆ. ಜಿಲ್ಲೆಯ ರೈತರ ಎರಡು ಬೆಳೆಗಳಿಗೆ ನೀರು ದೊರೆಯುವುದು ಸಂತಸದ ಸಂಗತಿಯಾಗಿದೆ. ತುಂಗಭದ್ರದ ಎಡದಂಡೆ ಮುಖ್ಯ ಕಾಲವೆ ಹಾಗೂ ವಿವಿಧ ಕಾಲುವೆಗಳಿಗೆ ಇಂದಿನಿಂದ ನೀರು ಹರಿಸಲಾಗಿದ್ದು, ಉಳಿದ ಕಾಲುವೆಗಳಿಗೆ ವೇಳಾಪಟ್ಟಿಯಂತೆ ನೀರು ಬಿಡಲಾಗುವುದು ಎಂದರು. ಮೈಸೂರು ಜಿಲ್ಲೆಯಲ್ಲಿ ಉತ್ತಮ ಮಳೆಯಾಗುತ್ತಿದ್ದು, ಕಬಿನಿ ಜಲಾಶಯದಿಂದ ಅಂದಾಜು ೭೦ ಸಾವಿರ ಕ್ಯೂಸೆಕ್ ನೀರನ್ನು ಹೊರಬಿಡಲಾಗುತ್ತಿದೆ. ನುಗು ಜಲಾಶಯಿಂದಲೂ ನೀರು ಹೊರಬಿಡುತ್ತಿರುವುದರಿಂದ ನದಿ ಪಾತ್ರದ ಗ್ರಾಮಗಳ ಜನರ ಸುರಕ್ಷತೆ ಸೂಕ್ತ ಮುನ್ನೆಚ್ಚರಿಕೆ ವಹಿಸಬೇಕು ಎಂದು ಜಿಲ್ಲಾಧಿಕಾರಿ ಜಿ.ಲಕ್ಷ್ಮೀಕಾಂತ ರೆಡ್ಡಿ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಮುಂದಿನ ಶನಿವಾರದೊಳಗೆ ಕೆಆರ್‌ಎಸ್ ಜಲಾಶಯದಿಂದಲೂ ನೀರು ಹೊರಬಿಡುವ ಸಾಧ್ಯತೆಯಿದೆ ಎಂದು ಅವರು ತಿಳಿಸಿದ್ದಾರೆ. ವಿಜಯನಗರ ಜಿಲ್ಲೆ ಹಗರಿಬೊಮ್ಮನಹಳ್ಳಿ ತಾಲೂಕಿನ ಮಾಲವಿ ಜಲಾಶಯಕ್ಕೆ ಇಂದು ಜಿಲ್ಲಾಧಿಕಾರಿ ಎಂ.ಎಸ್.ದಿವಾಕರ್ ಭೇಟಿ ನೀಡಿದರು. ಇತ್ತೀಚೆಗೆ ಜಲಾಶಯದಲ್ಲಿ ನಡೆದ

ಕಾಮಗಾರಿಗಳಿಂದ ಕ್ರಸ್ಟ್ ಗೇಟ್‌ಗಳಿಗೆ ಹಾನಿಯಾಗಿದ್ದು, ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು. ಮಾಲವಿ ಜಲಾಶಯದಿಂದ ತಾಲೂಕಿನ ರೈತರಿಗೆ ಆಗುವ ಅನುಕೂಲಗಳ ಬಗ್ಗೆ ರೈತ ಸಂಘಗಳ ಸದಸ್ಯರೊಂದಿಗೆ ಚರ್ಚೆ ನಡಿಸಿದರು. ಚಿಕ್ಕಮಗಳೂರು ಜಿಲ್ಲೆಯಲ್ಲಿ ಇಂದೂ ಸಹ ಭಾರೀ ಮಳೆಯಾಗಿದೆ. ಜಿಲ್ಲೆಗೆ ಹವಾಮಾನ ಇಲಾಖೆ, ರೆಡ್ ಅಲರ್ಟ್ ಎಚ್ಚರಿಕೆ ಘೋಷಿಸಿದ್ದು, ಚಿಕ್ಕಮಗಳೂರು, ಮೂಡಿಗೆರೆ, ಶೃಂಗೇರಿ, ಕೊಪ್ಪ ಭಾಗದಲ್ಲಿ ಜನಜೀವನ ಅಸ್ತವ್ಯಸ್ತವಾಗಿದೆ. ಮೂಡಿಗೆರೆ ಹಾಗೂ ಚಿಕ್ಕಮಗಳೂರು ತಾಲೂಕುಗಳ ಹಲವೆಡೆ ಕಾಫಿ ತೋಟಗಳಿಗೆ ನೀರು ನುಗ್ಗಿದೆ. ತರಿಕೆರೆ ತಾಲೂಕು ಕಲ್ಲತ್ತಗಿರಿ ಜಲಪಾತ ತುಂಬಿ ಧುಮುಕುತ್ತಿದೆ. ಅಲ್ಲಿಯ ದೇವಾಲಯ ಜಲಾವೃತಗೊಂಡಿದೆ. ಭದ್ರಾ ನದಿ ಅಪಾಯದ ಮಟ್ಟ ಮೀರಿ ಹರಿಯುತ್ತಿದೆ. ಲಕ್ಕವಳ್ಳಿ ಭದ್ರಾ ಜಲಾಶಯಕ್ಕೆ ಭಾರೀ ಪ್ರಮಾಣದಲ್ಲಿ ನೀರು ಹರಿದುಬರುತ್ತಿದೆ.

<><*<><>*><>

ಸಂಕ್ಷಿಪ್ತ ಸುದ್ದಿ

೧. ಪ್ರಧಾನಮಂತ್ರಿ ನರೇಂದ್ರ ಮೋದಿ ಈ ತಿಂಗಳ ೨೮ ರಂದು ಆಕಾಶವಾಣಿಯಲ್ಲಿ ತಮ್ಮ ಮನ್ ಕಿ ಬಾತ್ ಕಾರ್ಯಕ್ರಮವನ್ನು ಪ್ರಸ್ತುತಪಡಿಸಲಿದ್ದಾರೆ. ಈ ಕಾರ್ಯಕ್ರಮಕ್ಕಾಗಿ ಸಾರ್ವಜನಿಕರು ತಮ್ಮ ವಿಚಾರಗಳನ್ನು ಮೈ ಗೌ ಅಥವಾ ನಮೋ ಆಪ್‌ಗಳಲ್ಲಿ ವಿನಿಯಮ ಮಾಡಿಕೊಳ್ಳಬೇಕು ಎಂದು ಅವರು ಮನವಿ ಮಾಡಿದ್ದಾರೆ.

೨. ರಾಷ್ಟ್ರೀಯ ಮಾದಕವಸ್ತುಗಳ ಸಹಾಯವಾಣಿ 'ಮಾನಸ್' - ೧-೯-೩-೩ ಕ್ಕೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಚಾಲನೆ ನೀಡಿದ್ದಾರೆ. ಮಾದಕ ವಸ್ತು ಕಳ್ಳ ಸಾಗಣೆಯ ಬಗ್ಗೆ ಈ ಸಹಾಯವಾಣಿ ಮೂಲಕ ನಾಗರಿಕರು ಮಾಹಿತಿ ಹಂಚಿಕೊಳ್ಳಬಹುದು.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>